# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1297 |
| ಸದಸ್ಯರ ಹೆಸರು | : | ಶ್ರೀ ಎಸ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24-12-2021. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತ್‌ಗಳಿಗೆ ಕಳೆದ 3 ವರ್ಷಗಳಲ್ಲಿ ಮರಳು ಗಣಿಗಾರಿಕೆಯಿಂದ ದೊರೆತ ರಾಜಧನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ಮರಳು ಗಣಿಗಾರಿಕೆಯಿಂದ ಸಂಗ್ರಹವಾಗುವ ರಾಜಧನ ಮತ್ತು ಹೆಚ್ಚುವರಿ ನಿಯುತಕಾಲಿಕ ಮೊತ್ತದಲ್ಲಿ ಶೇಕಡ 25% ರಷ್ಟು ಮೊತ್ತವನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು ನೀಡುವ ಮಾಹಿತಿ ಮತ್ತು ಶಿಫಾರಸ್ಸಿನ ಆಧಾರದ ಮೇಲೆ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲು ಜಿಲ್ಲಾ ವಲಯದ ಲೆಕ್ಕ ಶೀರ್ಷಿಕೆ 2515-00-198-1-10-300 (2515-00-103-0-94) ರಡಿ ಜಿಲ್ಲಾ ಪಂಚಾಯತ್‌ಗಳಿಗೆ ಆರ್ಥಿಕ ಇಲಾಖೆಯಿಂದ ಬಿಡುಗಡೆಗೊಳಿಸಲಾಗುತ್ತದೆ.<br><br>ಈ ಕುರಿತು 2018-19ನೇ ಸಾಲಿನಲ್ಲಿ ರೂ.1131.71 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. 2019-20 ನೇ ಸಾಲಿಗೆ ಸಂಬಂಧಿಸಿದಂತೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು ಪ್ರಸಕ್ತ ವರ್ಷ ಮಾಹಿತಿ ಸಲ್ಲಿಸಿದ್ದರಿಂದ, ದಿನಾಂಕ:24.11.2021 ರಂದು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳಿಗೆ ರೂ.3455.32 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.<br><br>ಆದೇಶದ ಪ್ರತಿ ಅನುಬಂಧ-1 ರಲ್ಲಿ ನೀಡಿದೆ. |
| (ಆ) | ಗಣಿಗಾರಿಕೆಯಿಂದ ದೊರೆತ ರಾಜಧನವನ್ನು ಯಾವ ಯಾವ ಉದ್ದೇಶಗಳಿಗಾಗಿ ಬಳಕೆ ಮಾಡಲಾಗುತ್ತದೆ; ಈ ಮೊತ್ತದಿಂದ ಗಣಿಗಾರಿಕೆಯಿಂದ ಹಾಳಾದ ಎಷ್ಟು ರಸ್ತೆಗಳನ್ನು ನಿರ್ಮಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) | ಗಣಿಗಾರಿಕೆಯಿಂದ ದೊರೆತ ರಾಜಧನವನ್ನು ಗ್ರಾಮ ಪಂಚಾಯತಿಗಳು ಶಾಶ್ವತವಾಗಿ ಆಸ್ತಿಗಳನ್ನು ನಿರ್ಮಾಣ ಮಾಡಿಕೊಳ್ಳಲು ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉಪಯೋಗಿಸಿಕೊಳ್ಳಬಹುದಾಗಿದೆ. |
| (ಇ) | ಗ್ರಾಮ ಪಂಚಾಯತ್‌ಗಳಿಗೆ 15ನೇ ರಾಜ್ಯ ಹಣಕಾಸು ಆಯೋಗದ ಅನುದಾನದಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳಾವುವು;; (ವಿವರ ನೀಡುವುದು) | ಗ್ರಾಮ ಪಂಚಾಯತಿಗಳು 15ನೇ ರಾಜ್ಯ ಹಣಕಾಸು ಆಯೋಗದ ಅನುದಾನದಲ್ಲಿ ಕೈಗೊಳ್ಳಬೇಕಾಗಿರುವ ಅಭಿವೃದ್ಧಿ ಕಾರ್ಯಕ್ರಮಗಳು;-<br><br>• ಮೂಲ ಅನುದಾನವನ್ನು ಗ್ರಾಮ ಪಂಚಾಯತಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993ರ ಪ್ರಕರಣ 58ರಲ್ಲಿ ನಿಗಧಿಪಡಿಸಿರುವಂತಹ ಕಾರ್ಯಗಳಿಗೆ ಯೋಜನೆ ತಯಾರಿಸಿ ವೆಚ್ಚ ಮಾಡುವುದು. ತಾಲ್ಲೂಕು ಪಂಚಾಯತಿಗಳು ಸದರಿ ಅಧಿನಿಯಮದ ಪ್ರಕರಣ 145ರಡಿಯಲ್ಲಿ ತಾಲ್ಲೂಕು ಪಂಚಾಯತಿಗಳಿಗೆ ವಹಿಸಿರುವ ಪ್ರಕಾರ್ಯಗಳಿಗೆ ಯೋಜನೆ ತಯಾರಿಸಿ ವೆಚ್ಚ ಮಾಡುವುದು. ಜಿಲ್ಲಾ ಪಂಚಾಯತಿಗಳು ಸದರಿ ಅಧಿನಿಯಮದ ಪ್ರಕರಣ 184ರಲ್ಲಿ ಜಿಲ್ಲಾ ಪಂಚಾಯತಿಗಳಿಗೆ ವಹಿಸಿರುವ |